**ಕರ್ನಾಟಕ ಸರ್ಕಾರ**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,**

**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು–560003**

E-Mail Id: adpiqsection@gmail.com Phone No: 080-23460525


**ಸಂಖ್ಯೆ: ಕ್ಯೂ5/ಕೆ.ಓ.ಎಸ್/ಪೂರಕ ಪರೀಕ್ಷೆ/ಅಕ್ಟೋಬರ್–2021/30/2020–21** **ದಿನಾಂಕ: 21/09/2020**

**:ಅಧಿಸೂಚನೆ:**

**ವಿಷಯ:** ಅಕ್ಟೋಬರ್–2021 ನೇ ಮಾಹೆಯಲ್ಲಿ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಪೂರಕ ಪರೀಕ್ಷೆ ನಡೆಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ:ಇಡಿ.73.ಎಸ್.ಎಲ್.ಬಿ.2006; ದಿನಾಂಕ:06.09.2006.
2. ಸರ್ಕಾರದ ಆದೇಶ ಸಂಖ್ಯೆ: ಇಡಿ.209.ಎಸ್.ಎಲ್.ಬಿ.2013; ದಿನಾಂಕ:06.12.2014.

**********

ಜುಲೈ–2021ರಲ್ಲಿ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಮುಖ್ಯ ಪರೀಕ್ಷೆಯನ್ನು ಬರೆದು ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಹಾಗೂ ಅದಕ್ಕೂ ಪೂರ್ವದಲ್ಲಿ ಪ್ರಥಮ ಬಾರಿಗೆ ಮಾರ್ಚ್ 2019 ಮತ್ತು ತದ ನಂತರ ಸಾಲುಗಳಲ್ಲಿ ಪರೀಕ್ಷೆ ತೆಗೆದುಕೊಂಡು ಅನುತ್ತೀರ್ಣರಾಗಿರುವ ಅಭ್ಯರ್ಥಿಗಳಿಗೆ ಅಕ್ಟೋಬರ್–2021ರಲ್ಲಿ ದಿನಾಂಕ:21/10/2021 ರಿಂದ ದಿನಾಂಕ:30/10/2021 ರವರೆಗೆ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಪೂರಕ ಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿದೆ. ಪರೀಕ್ಷಾ ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ. ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಪರೀಕ್ಷಾ ಪ್ರಕ್ರಿಯೆಗಳನ್ನು Online ವ್ಯವಸ್ಥೆಗೆ ತರಲಾಗಿದ್ದು, ಈ ಹಿನ್ನಲೆಯಲ್ಲಿ ಕೆ.ಓ.ಎಸ್ ಪೂರಕ ಪರೀಕ್ಷೆಗೆ Online ಮೂಲಕ ಅರ್ಜಿ ಆಹ್ವಾನಿಸಲಾಗುತ್ತಿದೆ. ಸದರಿ ಪರೀಕ್ಷೆಗೆ Online ಮೂಲಕ ನೋಂದಾಯಿಸಲು ಅನುತ್ತೀರ್ಣ ಅಭ್ಯರ್ಥಿಗಳು ಮಾತ್ರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಿರುತ್ತಾರೆ.

1. **ಸರ್ಕಾರದ ಆದೇಶ ಸಂಖ್ಯೆ:ಇಡಿ.209.ಎಸ್.ಎಲ್.ಬಿ.2013; ದಿನಾಂಕ:06.12.2014ರನ್ವಯ, ಮಾರ್ಚ್ 2019ರ ಪೂರ್ವದಲ್ಲಿ ಪರೀಕ್ಷೆ ತೆಗೆದುಕೊಂಡ ಅನುತ್ತೀರ್ಣ ಅಭ್ಯರ್ಥಿಗಳು ಅಕ್ಟೋಬರ್–2021 ರ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಯಮದಲ್ಲಿ ಅವಕಾಶವಿರುವುದಿಲ್ಲ.**
2. **ಪ್ರಥಮ ಬಾರಿಗೆ ಮಾರ್ಚ್ 2019ರ ಪರೀಕ್ಷೆ ತೆಗೆದುಕೊಂಡ ವಿದ್ಯಾರ್ಥಿಗಳಿಗೆ ಆರು ಪ್ರಯತ್ನಗಳ ಮಿತಿ ಅಕ್ಟೋಬರ್–2021ಕ್ಕೆ ಮುಕ್ತಾಯವಾಗುತ್ತದೆ. ಆದ್ದರಿಂದ ಆಯಾ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಕಲಿಕಾ ಕೇಂದ್ರಗಳಲ್ಲಿ ಇಂತಹ ವಿದ್ಯಾರ್ಥಿಗಳಿದ್ದಲ್ಲಿ ಅಂತಿಮ ಕಾಲಾವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದೆ.** ಇಲ್ಲವಾದಲ್ಲಿ ಮುಂದೆ ಪರೀಕ್ಷೆ ಬರೆಯಲು ಅಪೇಕ್ಷಿಸುವ ಸಂದರ್ಭಗಳಲ್ಲಿ ಹೊಸದಾಗಿ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಕಲಿಕಾ ಕೇಂದ್ರದಲ್ಲಿ ದಾಖಲಾಗಿ ಎಲ್ಲಾ ವಿಷಯಗಳಿಗೂ ಹೊಸ ಅಭ್ಯರ್ಥಿಯಾಗಿ ಪರೀಕ್ಷೆ ಬರೆಯಬೇಕಾಗುತ್ತದೆ.

**ಅರ್ಜಿಗಳನ್ನು ಸಲ್ಲಿಸಲು ಕಲಿಕಾ ಕೇಂದ್ರದ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:**

**(ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಭರ್ತಿ ಮಾಡಲು ಅನುಕೂಲವಾಗುವಂತೆ FlowChart ನೀಡಲಾಗಿದ್ದು ಅದನ್ನು**

ಕಡ್ಡಾಯವಾಗಿ ಓದಿಕೊಳ್ಳುವುದು.)

1 ಅಕ್ಟೋಬರ್–2021 ರ ಕೆ.ಓ.ಎಸ್ ಪೂರಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೊಂದಣಿ ಮಾಹಿತಿಯನ್ನು ಮಂಡಳಿಯ ಜಾಲತಾಣದಲ್ಲಿ Login/Other Exams/KOS Examination Login ನಲ್ಲಿ ಈ ಹಿಂದೆ ನೀಡಿರುವ ನೋಂದಣಿ ಸಂಖ್ಯೆಯನ್ನು ನಮೂದಿಸುವ ಮೂಲಕ ಮಾಹಿತಿಗಳನ್ನು Upload ಮಾಡಲು ಸೂಚಿಸಿದೆ.

2 ಕೆ.ಓ.ಎಸ್ ಪೂರಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದಿಸಿದಾಗ ಅಭ್ಯರ್ಥಿಗಳ ಪೂರಕ ಪರೀಕ್ಷೆಯ ಅರ್ಜಿ ಮಾಹಿತಿಯು **AUTO FETCH** ಆಗುತ್ತವೆ.

3 ಪತ್ರ ವ್ಯವಹಾರಕ್ಕೆ ಅನುಕೂಲಕರವಾದ ಅಂಚೆ ವಿಳಾಸ, ಮೊಬೈಲ್ ಫೋನ್ ಸಂಖ್ಯೆ ಹಾಗೂ E-Mail ವಿಳಾಸವನ್ನು ಭರ್ತಿ ಮಾಡಲು ಅವಕಾಶ ನೀಡಲಾಗುತ್ತದೆ.

4 **ಪರೀಕ್ಷಾ ಅರ್ಜಿಗಳನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಸಲ್ಲಿಸುವ ಸಮಯದಲ್ಲಿ ಅಭ್ಯರ್ಥಿಗಳ ನೇರಭಂಗಿಯ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯ.**

5 **ಭಾವಚಿತ್ರವನ್ನು ಮಾತ್ರವೇ ಸ್ಕ್ಯಾನ್ ಮಾಡಿಕೊಂಡು ಅಪ್ ಲೋಡ್ ಮಾಡಬೇಕೇ ಹೊರತು ಇಡೀ ಪೇಪರ್ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಂತಿಲ್ಲ.**

6 ಆನ್‌ಲೈನ್‌ನಲ್ಲಿ ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡುವಾಗ ನೈಜ ಅಭ್ಯರ್ಥಿಯ ಬದಲು ಬೇರೆ ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಿದರೆ ಅಂತಹ ಸಂಸ್ಥೆಯ ಮುಖ್ಯಸ್ಥರ/ಸಮನ್ವಯಾಧಿಕಾರಿಗಳ ಮೇಲೆ ನಿಯಮಾನುಸಾರ ಕಠಿಣ ಕ್ರಮ ಜರುಗಿಸಲಾಗುವುದು. ಇಂತಹ ದೋಷಗಳನ್ನು ಪರಿಶೀಲಿಸದೆ, ಖಾತ್ರಿಪಡಿಸಿಕೊಳ್ಳದೆ, ಯಥಾವತ್ತಾಗಿ ಅನುಮೋದಿಸಿದರೆ ಕಲಿಕಾ ಕೇಂದ್ರದವರ ಮೇಲೆ ನಿಯಮಾನುರೀತ್ಯಾ ಕ್ರಮಕೈಗೊಳ್ಳಲಾಗುವುದು.

7 ಕಲಿಕಾ ಕೇಂದ್ರದ ಮುಖ್ಯಸ್ಥರು ಲಾಗಿನ್‌ನಲ್ಲಿ ನಾಮಯಾದಿ ಪಟ್ಟಿಯನ್ನು (Nominal Roll) Down load ಮಾಡಿಕೊಂಡು ಪರಿಶೀಲಿಸಿ ಶುಲ್ಕ ಪಾವತಿಸಿದ ಮೂಲ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು.

**8 ಜುಲೈ–2021 ರ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮರುಮೌಲ್ಯಮಾಪನದ ಫಲಿತಾಂಶವನ್ನು ಕಾಯದೆ ಅನುತ್ತೀರ್ಣರಾದ ವಿಷಯಗಳಿಗೆ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸುವುದು.**

9 ಮೇಲಿನ ಎಲ್ಲಾ ನಿಯಮಗಳನ್ನು ಸಂಬಂಧಪಟ್ಟ ಕಲಿಕಾ ಕೇಂದ್ರದ ಮುಖ್ಯಸ್ಥರು ತಪ್ಪದೇ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಕಲಿಕಾ ಕೇಂದ್ರದ ಮುಖ್ಯಸ್ಥರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

**3. ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರಗಳು:**

| **ಪರೀಕ್ಷಾ ಶುಲ್ಕದ ವಿವರ** | **ಶುಲ್ಕದ ಮೊತ್ತ ರೂ.ಗಳಲ್ಲಿ** |
|---|---|
| ಅ) ಒಂದು ವಿಷಯಕ್ಕೆ | 360–00 |
| ಆ) ಎರಡು ವಿಷಯಗಳಿಗೆ | 600–00 |
| ಇ) ಮೂರು ವಿಷಯಗಳಿಗೆ | 840–00 |
| ಈ) ನಾಲ್ಕು ಮತ್ತು ಅದಕ್ಕೂ ಮೇಲ್ಪಟ್ಟ ವಿಷಯಗಳಿಗೆ | 1416–00 |

**4. ಅಭ್ಯರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ**

- ಅಭ್ಯರ್ಥಿಗಳ ಪರೀಕ್ಷಾ ಅರ್ಜಿಯನ್ನು ಕಲಿಕಾ ಕೇಂದ್ರದ ಮುಖ್ಯಸ್ಥರು ಮಂಡಳಿಯ ಜಾಲತಾಣದಲ್ಲಿ, ತಮ್ಮ ಸಂಸ್ಥೆಯ Login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆವಾರು ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್‌ನಲ್ಲಿ ಚಲನ್ ಜನರೇಟ್ ಮಾಡುವ ವ್ಯವಸ್ಥೆ ಮಾಡಲಾಗಿದೆ. ಸದರಿ ಚಲನ್

ಅನ್ನು Login ನಿಂದ ಡೌನ್‌ಲೋಡ್ ಮಾಡಿಕೊಂಡು ಅದರಲ್ಲಿ ನಮೂದಿಸಿರುವ ಮೊತ್ತವನ್ನು ಅದೇ ಚಲನ್ ಬಳಸಿ ನಿಗದಿತ ಅವಧಿಯಲ್ಲಿ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸುವುದು.

- ಆನ್‌ಲೈನ್ ಚಲನ್ ಹೊರತುಪಡಿಸಿ ಮತ್ಯಾವುದೇ ಚಲನ್, ಡಿ.ಡಿ, ಚೆಕ್ ಮೂಲಕ ಮಾಡಲಾದ ಪಾವತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಅಭ್ಯರ್ಥಿಗಳ ಶುಲ್ಕವನ್ನು ನಿಗದಿತ ದಿನಾಂಕದ ನಂತರ ಚಲನ್ ಮೂಲಕ ಪಾವತಿಸಿದಲ್ಲಿ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಹಾಗೂ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದರೂ ಸಹ ಹಿಂದಿರುಗಿಸಲಾಗುವುದಿಲ್ಲ.
- ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸುವ ವ್ಯವಸ್ಥೆ ಮಾಡಲಾಗಿದ್ದು, ಆನ್‌ಲೈನ್ ಮೂಲಕ ಪಾವತಿಸಿದಲ್ಲಿ ಪಾವತಿಸಿರುವ ಬಗ್ಗೆ ಆನ್‌ಲೈನ್ ರಶೀದಿಯ ಪ್ರತಿಯನ್ನು ಅರ್ಜಿಯ ಜೊತೆಯಲ್ಲಿ ಸಲ್ಲಿಸಬೇಕು.
- **ಮಂಡಳಿ ನಿಗದಿಪಡಿಸಿದ ಕೊನೆಯ ದಿನಾಂಕಗಳು ಸರ್ಕಾರಿ ರಜಾ ದಿನವೆಂದು ಘೋಷಿಸಿದ್ದಲ್ಲಿ ಆ ದಿನದ ಮಾರನೆಯ ಕೆಲಸದ ದಿನವನ್ನು ಕೊನೆಯ ದಿನವೆಂದು ಪರಿಗಣಿಸಲಾಗುವುದು.**

**5. ನಾಮಿನಲ್‌ರೋಲ್, NEFT CHALLAN ಸಲ್ಲಿಸಲು ನಿಗಧಿಗೊಳಿಸಿರುವ ದಿನಾಂಕಗಳ ವಿವರ:-**

| ಕ್ರಸಂ | ವಿವರ | ದಿನಾಂಕ: |
|---|---|---|
| 1 | ಅಧಿಸೂಚನೆ ಪ್ರಕಟಿಸುವುದು | 21/09/2021 |
| 2 | ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಪ್ರಾರಂಭ ದಿನಾಂಕ | 22/09/2021 |
| 3 | ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | 29/09/2021 |
| 4 | ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 01/10/2021 |
| 5 | ಅಕ್ಟೋಬರ್-2021 ರ ಕೆ.ಓ.ಎಸ್ ಪೂರಕ ಪರೀಕ್ಷೆಗೆ ಆನ್‌ಲೈನ್ ಚಲನ್ ಡೌನ್‌ಲೋಡ್ ಮಾಡಿಕೊಂಡು ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 04/10/2021 |
| 6 | ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಹಾಗೂ ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ (ರಿ), ಬೆಂಗಳೂರು ಸಂಸ್ಥೆಯ ಅಡಿಗಳಲ್ಲಿ ನೋಂದಾಯಿಸಿಕೊಂಡಿರುವ ಕಲಿಕಾ ಕೇಂದ್ರಗಳ ಅಭ್ಯರ್ಥಿಗಳ ನಾಮಿನಲ್ ರೋಲ್, ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿ ಹಾಗೂ ಸಂಭಂಧಿಸಿದ ಇತರೆ ದಾಖಲೆಗಳನ್ನು ಅನುಮೋದಿಸಲು ಕೊನೆಯ ದಿನಾಂಕ | 05/10/2021 |
| 7 | ಡಯಟ್‌ನಿಂದ ಅರ್ಜಿಗಳನ್ನು ಅನುಮೋದಿಸಲು ಕೊನೆಯ ದಿನಾಂಕ | 08/10/2021 |
| 8 | ಪ್ರವೇಶ ಪತ್ರಗಳನ್ನು ಆನ್‌ಲೈನ್‌ನಲ್ಲಿ ಪ್ರಕಟಿಸುವ ದಿನಾಂಕ | 13/10/2021 |

**6. ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಹಾಗೂ ಅಧ್ಯಕ್ಷರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು ಇವರು ಪಾಲಿಸಬೇಕಾದ ಸೂಚನೆಗಳು.**

- ನಾಮಿನಲ್‌ರೋಲನ್ನು ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳು ಕಡ್ಡಾಯವಾಗಿ ದೃಢೀಕರಿಸಬೇಕು ಮತ್ತು ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಹಾಗೂ ಅಧ್ಯಕ್ಷರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು ಇವರು ನಾಮಿನಲ್‌ರೋಲ್‌ಗೆ "ಮೇಲು ಸಹಿ" ಮಾಡುವುದು.
- ಎಲ್ಲಾ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ನಿಗಧಿತ ಸಮಯದಲ್ಲಿ ಪಾವತಿಸಿರುವ ಮೊತ್ತವು ಸರಿ ಇದೆಯೇ? ಎಂಬುದನ್ನು ಖಾತ್ರಿಪಡಿಸಿಕೊಳ್ಳಬೇಕು. **ಈ ರೀತಿ ಪರಿಶೀಲಿಸುವಾಗ ಅನುತ್ತೀರ್ಣರಾಗಿರುವ ಎಲ್ಲಾ ವಿಷಯಗಳಿಗೂ ವಿದ್ಯಾರ್ಥಿ ಪರೀಕ್ಷೆ ತೆಗೆದುಕೊಳ್ಳಬೇಕು ಹಾಗೂ ಅನುತ್ತೀರ್ಣ ಹೊಂದಿರುವ ಎಲ್ಲಾ ವಿಷಯಗಳಿಗೆ ಲೆಕ್ಕಾಚಾರ ಮಾಡಿ ಪರೀಕ್ಷಾ ಶುಲ್ಕ**

**ಪಾವತಿಸುವುದು ಕಡ್ಡಾಯವಾಗಿದೆ.** ಇಲ್ಲವಾದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಿಸಿದ ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

ಸದರಿ ಪರೀಕ್ಷೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಶ್ರೀಮತಿ ಟಿ.ಡಿ.ಶೈಲ, ಸಹಾಯಕ ನಿರ್ದೇಶಕರು, 4ನೇ ಮಹಡಿ, ಕೆ.ಓ.ಎಸ್ ವಿಭಾಗ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003, ಮೊಬೈಲ್ ಸಂಖ್ಯೆ:9480343741 ಸ್ಥಿರ ದೂರವಾಣಿ ಸಂಖ್ಯೆ:080–23460525 ಇವರನ್ನು ಸಂಪರ್ಕಿಸಬಹುದಾಗಿದೆ.

21/9/2021

(ಎಸ್.ಗೀತಾ)
**ನಿರ್ದೇಶಕರು**
**(ಇತರೆ ಪರೀಕ್ಷೆಗಳು)**

**ಪ್ರತಿಯನ್ನು:**

1. ಗೌರವಗಳೊಂದಿಗೆ ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರುರವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಹಾಗೂ ಅಧ್ಯಕ್ಷರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು ರವರ ಅತಿತುರ್ತು ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ, ಮಂಡಳಿಯು ಸೂಚಿಸಿರುವ ದಿನಾಂಕದಂದೇ ಮಂಡಳಿಗೆ ಎಲ್ಲಾ ದಾಖಲೆಗಳನ್ನು ತಪ್ಪದೇ ಸಲ್ಲಿಸಲು ಕೋರಿದೆ.
3. ಡಯಟ್ ಪ್ರಾಂಶುಪಾಲರಿಗೆ ಅಗತ್ಯ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳಿಗೆ ಪ್ರಾಂಶುಪಾಲರು, ಡಯಟ್‌ರವರ ಮುಖಾಂತರ ಅಗತ್ಯ ಮತ್ತು ತುರ್ತು ಕ್ರಮಕ್ಕಾಗಿ ಕಳುಹಿಸಿದೆ.
5. ಶಾಖಾಧಿಕಾರಿಗಳು, ಗಣಕ ಶಾಖೆ, ಇತರೆ ಪರೀಕ್ಷೆಗಳು.
6. ಕಛೇರಿ ಪ್ರತಿ.